# ರಾಷ್ಟ್ರೀಯ ಶಿಕ್ಷಣ ನೀತಿ ಬಗ್ಗೆ ವಿಶೇಷ ತರಬೇತಿ ಕಾರ್ಯಾಗಾರ ನಡೆಸಿ: ಹೊರಟ್ಟಿ

**ಹುಬ್ಬಳ್ಳಿ:** ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸುವ ಮೊದಲು ಈ ಕುರಿತು ರಾಜ್ಯಮಟ್ಟದಿಂದ ತಾಲೂಕು ಮಟ್ಟದವರೆಗೆ ವಿಶೇಷ ತರಬೇತಿ ಕಾರ್ಯಾಗಾರ ನಡೆಸಬೇಕಿರುವುದು ಅತಿ ಅವಶ್ಯಕವಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಜ್ಯದ ಶಿಕ್ಷಣ ಪರಿಸರವನ್ನು ಗಮನದಲ್ಲಿಟ್ಟುಕೊಂಡು, ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದಲ್ಲಿ ಹೇಗೆ ಅನುಷ್ಠಾನಗೊಳಿಸಬೇಕು ಎಂಬುದರ ಬಗ್ಗೆ ವಿಸ್ತೃತ ಚರ್ಚೆಯಾಗಬೇಕು. ನಂತರ ಅದನ್ನು ರಾಜ್ಯದಲ್ಲಿ ಅರ್ಥಪೂರ್ಣವಾಗಿ ಅನುಷ್ಠಾನಗೊಳಿಸಲು ಅನುಕೂಲವಾಗುತ್ತದೆ ಎಂದರು.

ಕೇಂದ್ರವು ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸಲು ರಾಜ್ಯ ಸರಕಾರಗಳಿಗೆ ತಿಳಿಸಿದೆ. ಆದರೆ, ಕರ್ನಾಟಕ ರಾಜ್ಯದಲ್ಲಿ ಅದನ್ನು ಅರ್ಥಪೂರ್ಣವಾಗಿ ಪ್ರಗತಿದಾಯಕವಾಗಿ ಜಾರಿಯಾಗಿಲ್ಲ, ಇನ್ನು ಮುಂದೆ ಜಾರಿಯಾಗುವ ಮುಂಚೆ ವಿಭಾಗೀಯ, ಜಿಲ್ಲಾ ಮತ್ತು ತಾಲೂಕು ಮಟ್ಟಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯ ಬಗ್ಗೆ ಕಾರ್ಯಾಗಾರಗಳು ನಡೆಯಬೇಕು ಎಂದು ತಿಳಿಸಿದರು.

ಸಮಗ್ರ ಶಿಕ್ಷಣ ಮೌಲ್ಯಾಧಾರಿತವಾಗಿ ಜಾರಿಗೊಳ್ಳಲು ಸರಕಾರ ಯಾವುದೇ ಇರಲಿ ಮುತುವರ್ಜಿಯಿಂದ ಕಾರ್ಯ ನಿರ್ವಹಿಸಬೇಕು. ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು. ಚಿಂತಕರ ಚಾವಡಿ ಮೇಲ್ಮನೆ ಎಂಬುದು ಈ ಮೊದಲು ಚಿಂತಕರ ಚಾವಡಿಯಾಗಿತ್ತು. ಅಲ್ಲಿ ಅನೇಕ ಗಹನವಾದ ವಿಚಾರಗಳು ಬಹಳಷ್ಟು ಮುತುವರ್ಜಿಯಿಂದ ಚರ್ಚಿಸಲ್ಪಡುತ್ತಿದ್ದವು. ಆದರೆ ಈಗ ಹಾಗಾಗುತ್ತಿಲ್ಲ ಎಂಬುದು ತಮಗೆ ಬೇಸರದ ಸಂಗತಿಯಾಗಿದೆ. ಈ ಬಾರಿ ವಿಧಾನ ಸಭೆಗೆ ಅನೇಕ ಯುವಕರು ಆಯ್ಕೆ ಆಗಿರುವುದು ಸಂತೋಷದ ಸಂಗತಿ. ಎಲ್ಲರೂ ಸೇರಿ ರಾಜ್ಯದ ಅಭಿವೃದ್ಧಿಗೆ ಚಿಂತಿಸಿ, ಶ್ರಮಿಸಬೇಕೆಂದು ಹೊರಟ್ಟಿ ತಿಳಿಸಿದ್ದಾರೆ.

ಹೊಸ ಸರಕಾರದ ರಚನೆಯಾಗಿದೆ. ಇನ್ನು ಮುಂದೆ ಅನೇಕ ಅಭಿವೃದ್ಧಿಪರ ಸಭೆಗಳು ನಡೆಯಲಿವೆ. ಹೊಸ ಸರಕಾರದ ಬಜೆಟ್ ಪ್ರಕ್ರಿಯೆಗಳೂ ಪ್ರಾರಂಭವಾಗಲಿವೆ. ಜನರ ನಿರೀಕ್ಷೆಯನ್ನು ಸಾಕಾರಗೊಳಿಸುವ ಕಾರ್ಯವನ್ನು ನೂತನ ಸರಕಾರ ಮಾಡಬೇಕಿದೆ. ಅದಕ್ಕಾಗಿ ಎಲ್ಲರೂ ಒಮ್ಮನದಿಂದ ರಾಜ್ಯದ ಅಭಿವೃದ್ಧಿಗೆ ದುಡಿಯಬೇಕಿದೆ ಎಂದು ಸಭಾಪತಿ ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ.

# ರಾಷ್ಟ್ರೀಯ ಶಿಕ್ಷಣ ನೀತಿ ಕುರಿತು ವಿಸ್ತೃತ ಚರ್ಚೆಯಾಗಲಿ: ಹೊರಟ್ಟಿ

ಹುಬ್ಬಳ್ಳಿ: ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೊಳಿಸುವ ಮೊದಲು ಈ ಕುರಿತು ರಾಜ್ಯಮಟ್ಟದಿಂದ ತಾಲೂಕು ಮಟ್ಟದವರೆಗೆ ವಿಶೇಷ ತರಬೇತಿ ಕಾರ್ಯಾಗಾರ ನಡೆಸಬೇಕಿರುವುದು ಅತಿ ಅವಶ್ಯಕವಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯ ಪಟ್ಟಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದ ಶಿಕ್ಷಣ ಪರಿಸರ ಗಮನದಲ್ಲಿಟ್ಟುಕೊಂಡು ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದಲ್ಲಿ ಹೇಗೆ ಅನುಷ್ಠಾನಗೊಳಿಸಬೇಕು ಎಂಬುದರ ಬಗ್ಗೆ ವಿಸ್ತೃತ ಚರ್ಚೆಯಾಗಬೇಕು.



ನಂತರ ಅದನ್ನು ರಾಜ್ಯದಲ್ಲಿ ಅರ್ಥಪೂರ್ಣವಾಗಿ ಅನುಷ್ಠಾನಗೊಳಿಸಲು ಅನುಕೂಲವಾಗುತ್ತದೆ. ಕೇಂದ್ರವು ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೊಳಿಸಲು ರಾಜ್ಯ ಸರ್ಕಾರಗಳಿಗೆ ತಿಳಿಸಿದೆ. ಆದರೆ ಕರ್ನಾಟಕದಲ್ಲಿ ಅದಿನ್ನೂ ಅರ್ಥಪೂರ್ಣ, ಪ್ರಗತಿದಾಯಕವಾಗಿ ಜಾರಿಯಾಗಿಲ್ಲ. ಜಾರಿಯಾಗುವ ಮುಂಚೆ ವಿಭಾಗೀಯ, ಜಿಲ್ಲಾ ಮತ್ತು ತಾಲೂಕು ಮಟ್ಟಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಬಗ್ಗೆ ವಿಸ್ತೃತ ಚರ್ಚೆ ಮತ್ತು ಕಾರ್ಯಾಗಾರಗಳು ನಡೆಯಬೇಕಿದೆ. ಸಮಗ್ರ ಶಿಕ್ಷಣ ಮೌಲ್ಯಾಧಾರಿತವಾಗಿ ಜಾರಿಗೊಳ್ಳಲು ಸರ್ಕಾರ ಯಾವುದೇ ಇರಲಿ ಮುತುವರ್ಜಿಯಿಂದ ಕಾರ್ಯ ನಿರ್ವಹಿಸಬೇಕು. ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದಿದ್ದಾರೆ.

ಮೇಲ್ಮನೆ ಎಂಬುದು ಈ ಮೊದಲು ಚಿಂತಕರ ಛಾವಡಿಯಾಗಿತ್ತು. ಅಲ್ಲಿ ಅನೇಕ ಗಹನವಾದ ವಿಚಾರಗಳು ಬಹಳಷ್ಟು ಮುತುವರ್ಜಿಯಿಂದ ಚರ್ಚಿಸಲ್ಪಡುತ್ತಿದ್ದವು. ಆದರೆ ಈಗ ಹಾಗಾಗುತ್ತಿಲ್ಲ ಎಂಬುದು ಬೇಸರದ ಸಂಗತಿ. ಈ ಬಾರಿಯ ವಿಧಾನಸಭೆಗೆ ಅನೇಕ ಯುವಕರು ಆಯ್ಕೆ ಆಗಿರುವುದು ಸಂತೋಷದ ಸಂಗತಿ. ಎಲ್ಲರೂ ಸೇರಿ ರಾಜ್ಯದ ಅಭಿವೃದ್ಧಿಗೆ ಚಿಂತಿಸಿ, ಶ್ರಮಿಸಬೇಕು.

ಹೊಸ ಸರ್ಕಾರ ರಚನೆಯಾಗಿದೆ. ಇನ್ನು ಮುಂದೆ ಅನೇಕ ಅಭಿವೃದ್ಧಿಪರ ಸಭೆಗಳು ನಡೆಯಲಿವೆ. ಹೊಸ ಸರ್ಕಾರದ ಬಜೆಟ್ ಪ್ರಕ್ರಿಯೆಗಳೂ ಪ್ರಾರಂಭವಾಗಲಿವೆ. ಜನರ ನಿರೀಕ್ಷೆಯನ್ನು ಸಾಕಾರಗೊಳಿಸುವ ಕಾರ್ಯವನ್ನು ನೂತನ ಸರ್ಕಾರ ಮಾಡಬೇಕಿದೆ. ಅದಕ್ಕಾಗಿ ಎಲ್ಲರೂ ಒಮ್ಮತದಿಂದ ರಾಜ್ಯದ ಅಭಿವೃದ್ಧಿಗೆ ದುಡಿಯಬೇಕಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.